# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1032

ಸದಸ್ಯರ ಹೆಸರು : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 19.12.2018.

ಉತ್ತರಿಸುವ ಸಚಿವರು : ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆಯಲ್ಲಿ ಕಂದಾಯ ಇಲಾಖೆಯಲ್ಲಿ ಮಂಜೂರಾದ ಗ್ರಾಮಲೆಕ್ಕಿಗರ ಒಟ್ಟು ಹುದ್ದೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) | (ಕೆಳಗಿನ ಕೋಷ್ಟಕ) |
| ಆ | ಹಾಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮಲೆಕ್ಕಿಗರ ಸಂಖ್ಯೆ ಎಷ್ಟು; ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ನೀಡುವುದು) | (ಕೆಳಗಿನ ಕೋಷ್ಟಕ) |

| ಕ್ರ ಸಂ. | ತಾಲ್ಲೂಕು | ಮಂಜೂರಾದ ಹುದ್ದೆಗಳ ಸಂಖ್ಯೆ | ಕಾರ್ಯ ನಿರ್ವಹಿಸುತ್ತಿರುವ ಗ್ರಾಮಲೆಕ್ಕಿಗರ ಸಂಖ್ಯೆ | ಖಾಲಿಯಿರುವ ಹುದ್ದೆಗಳ ಸಂಖ್ಯೆ |
|---|---|---|---|---|
| 01 | ಬೀದರ | 69 | 55 | 14 |
| 02 | ಔರಾದ [ಬಿ] | 67 | 59 | 08 |
| 03 | ಭಾಲ್ಕಿ | 70 | 60 | 10 |
| 04 | ಹುಮನಾಬಾದ | 67 | 58 | 09 |
| 05 | ಬಸವಕಲ್ಯಾಣ | 72 | 60 | 12 |
| | ಒಟ್ಟು | **345** | **292** | **53** |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ | ಅನೇಕ ಗ್ರಾಮಲೆಕ್ಕಿಗರು ( ಕಾರ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿಯೇ ವಾಸವಾಗದಿರುವುದಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಗ್ರಾಮಲೆಕ್ಕಿಗರು ಅವರುಗಳನ್ನು ಸ್ಥಳ ನಿಯುಕ್ತಿಗೊಳಿಸಿದ ವೃತ್ತ / ಕೇಂದ್ರ ಸ್ಥಾನಗಳಲ್ಲಿ ಕಡ್ಡಾಯವಾಗಿ ವಾಸವಾಗಿರತಕ್ಕದ್ದು ಹಾಗೂ ಸಾರ್ವಜನಿಕ ಮತ್ತು ಕಛೇರಿ ಕಾರ್ಯಗಳಲ್ಲಿ ವಿಳಂಬಕ್ಕೆ ಅವಕಾಶ ನೀಡದಂತೆ ಕಾರ್ಯ ನಿರ್ವಹಿಸುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ:ಕಂಇ 03 ಬಿಎಸ್‌ಸಿ 2009 ದಿನಾಂಕ:15/01/2009 ಮತ್ತು ಕಂಇ 97 ಬಿಎಸ್‌ಸಿ 2016 ದಿನಾಂಕ:25/06/2016ರಲ್ಲಿ ಈಗಾಗಲೇ ಸೂಚಿಸಲಾಗಿದೆ. |
| ಈ | ಗ್ರಾಮ ಪಂಚಾಯತ್ ವ್ಯಾಪ್ತಿ ಪ್ರದೇಶದಲ್ಲಿಯೇ ಕಡ್ಡಾಯವಾಗಿ ಗ್ರಾಮಲೆಕ್ಕಿಗರು ವಾಸಿಸುವಂತೆ ಹಾಗೂ ಪಂಚಾಯತಿಗಳ ಅಧೀನದಲ್ಲಿಯೇ ಕರ್ತವ್ಯ ನಿರ್ವಹಿಸುವಂತೆ ಮಾಡಲು ಸರ್ಕಾರಕ್ಕಿರುವ ತೊಂದರೆಯೇನು; | ಗ್ರಾಮಲೆಕ್ಕಿಗರು ನೇಮಕಗೊಂಡ ಕಂದಾಯ ವೃತ್ತದಲ್ಲಿಯೇ ಕಡ್ಡಾಯವಾಗಿ ವಾಸವಿರುವಂತೆ ಸೂಚಿಸಿ ಈಗಾಗಲೇ ಸರ್ಕಾರದಿಂದ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ಗ್ರಾಮಲೆಕ್ಕಿಗರ ಮತ್ತು ಪಂಚಾಯಿತಿಗಳ ಕಾರ್ಯ ಸ್ವರೂಪವು ವಿಭಿನ್ನವಾಗಿದ್ದು, ಆಡಳಿತ ಇಲಾಖೆಗಳು ಬೇರೆ ಬೇರೆಯಾಗಿರುವುದರಿಂದ, ಗ್ರಾಮಲೆಕ್ಕಿಗರು ಪಂಚಾಯಿತಿಗಳ ಅಧೀನದಲ್ಲಿ ಕರ್ತವ್ಯ ನಿರ್ವಹಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ. |
| ಉ | ಗ್ರಾಮ ಪಂಚಾಯಿತಿಯ ಪಿ.ಡಿ.ಓ ಮತ್ತು ಕಾರ್ಯದರ್ಶಿ ಹಾಗೂ ಗ್ರಾಮಲೆಕ್ಕಿಗರು ಒಂದೇ ಸ್ಥಳದಲ್ಲಿ ಕಾರ್ಯ ನಿರ್ವಹಿಸುತ್ತಿಲ್ಲವಾದ್ದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಗ್ರಾಮ ಪಂಚಾಯಿತಿ ಕೇಂದ್ರ ಸ್ಥಳದಲ್ಲಿಯೇ ಗ್ರಾಮಲೆಕ್ಕಿಗರು ವಾಸಿಸುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಇಲ್ಲ. |

ಸಂಖ್ಯೆ: ಕಂಇ 347 ಬಿಎಸ್‌ಸಿ 2018

(ಆರ್.ವಿ. ದೇಶಪಾಂಡೆ)
ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು.